ಗುರುವಾರ 28.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 35

Digital Varthe Kannada Daily Volume 01 - Issue 35 Thursday 2ಆ.08.2025 Price: 5/- Rs 2 Pages Bangalore

# ಡಿಜಿಟಲ್ ವಾರ್ತೆ

www.digitalvarthe.com

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# ಟ್ರಂಪ್ 24 ಗಂಟೆ ಕಾಲಾವಕಾಶ ನೀಡಿದ್ದರು, ಮೋದಿ ಕೇವಲ 5 ಗಂಟೆಗಳಲ್ಲಿ ಪಾಲಿಸಿದರು: ರಾಹುಲ್ ಗಾಂಧಿ

## ಟ್ರಂಪ್ ನಿರ್ದೇಶನವನ್ನು ಕೇವಲ 5 ಗಂಟೆಗಳಲ್ಲಿ ಪಾಲಿಸಿದ್ದರು

ಮುಜಫರ್ ಪುರ್: ಕಳೆದ ಮೇ ತಿಂಗಳಲ್ಲಿ ಪಾಕಿಸ್ತಾನದೊಂದಿಗಿನ ಮಿಲಿಟರಿ ಸಂಘರ್ಷವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಕೇಳಿಕೊಂಡ ಕೇವಲ 5 ಗಂಟೆಗಳಲ್ಲಿ ಪ್ರಧಾನಿ ಮೋದಿ ನಿಲ್ಲಿಸಲು ಒಪ್ಪಿಕೊಂಡರು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬುಧವಾರ ಟೀಕಿಸಿದ್ದಾರೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ಬಿಹಾರದ ಮುಜಫರ್ ಪುರ್ ಜಿಲ್ಲೆಯಲ್ಲಿ ನಡೆದ ರ್ಯಾಲಿಯಲ್ಲಿ ಇಂದು ಮಾತನಾಡಿದರು. ಬಿಹಾರದಲ್ಲಿ ರಾಹುಲ್ ಗಾಂಧಿಯವರು ರಾಜ್ಯವ್ಯಾಪಿ ಮತದಾರ ಅಧಿಕಾರ ಯಾತ್ರೆ ನಡೆಸುತ್ತಿದ್ದು, ಇಂದು ಇಂಡಿಯಾ ಬ್ಲಾಕ್ ಪಾಲುದಾರ ಪಕ್ಷಗಳಾದ ಡಿಎಂಕೆಯ ಎಂ ಕೆ




ಸ್ಟಾಲಿನ್ ಮತ್ತು ಆರ್‌ಜೆಡಿಯ ತೇಜಸ್ವಿ ಯಾದವ್ ಕೂಡ ಭಾಗಿಯಾಗಿದ್ದರು.

ಡೊನಾಲ್ಡ್ ಟ್ರಂಪ್ ಇಂದು ಏನು ಹೇಳಿದ್ದಾರೆ? ಪಾಕಿಸ್ತಾನದೊಂದಿಗಿನ ಉದ್ವಿಗ್ನತೆಯ ಸಂದರ್ಭದಲ್ಲಿ ಅವರು ಮೋದಿಗೆ ಕರೆ ಮಾಡಿ 24 ಗಂಟೆಗಳಲ್ಲಿ ಹೋರಾಟವನ್ನು ನಿಲ್ಲಿಸುವಂತೆ ಸೂಚಿಸಿದ್ದರು. ಮೋದಿ ತಕ್ಷಣ ಅವರು ಹೇಳಿದಂತೆ ಕೇಳಿದರು. ಟ್ರಂಪ್ ನಿರ್ದೇಶನವನ್ನು ಕೇವಲ 5 ಗಂಟೆಗಳಲ್ಲಿ ಪಾಲಿಸಿದ್ದರು ಎಂದು ರಾಹುಲ್ ಗಾಂಧಿ ಆರೋಪಿಸಿದ್ದಾರೆ.

ಟ್ರಂಪ್ ಅವರ ವೀಡಿಯೊವನ್ನು ಉಲ್ಲೇಖಿಸಿ, ಅದರಲ್ಲಿ ಅವರು ಶ್ವೇತಭವನದಲ್ಲಿ ಕ್ಯಾಬಿನೆಟ್ ಸಭೆಯನ್ನು ಉದ್ದೇಶಿಸಿ ಮಾತನಾಡುವುದನ್ನು ಕಾಣಬಹುದು. ಪರಮಾಣು ಶಕ್ತಿ ರಾಷ್ಟ್ರಗಳಾದ ಭಾರತ ಮತ್ತು ಪಾಕಿಸ್ತಾನ ನಡುವಿನ ಬಿಕ್ಕಟ್ಟನ್ನು ತಮ್ಮ ಮಧ್ಯಸ್ಥಿಕೆಯ ಮೂಲಕ ನಿಲ್ಲಿಸಲಾಗಿದೆ ಎಂದು ಅಮೆರಿಕ ಅಧ್ಯಕ್ಷರು ಒತ್ತಾಯಿಸುತ್ತಿದ್ದಾರೆ,

ಆದರೆ ವಿದೇಶಾಂಗ ಇಲಾಖೆ ಅಮೆರಿಕ ಅಧ್ಯಕ್ಷರ ಹೇಳಿಕೆಯನ್ನು ನಿರಾಕರಿಸಿತ್ತು. ಭಾರತ ಮತ್ತು ಪಾಕಿಸ್ತಾನ ತಮ್ಮ ಮಿಲಿಟರಿಗಳ ನಡುವಿನ ನೇರ ಮಾತುಕತೆಯ ನಂತರ ಮೇ ತಿಂಗಳಲ್ಲಿ ತಮ್ಮ ಮಿಲಿಟರಿ ಕ್ರಮಗಳನ್ನು ನಿಲ್ಲಿಸಿವೆ ಎಂದು ಕೇಂದ್ರ ಸರ್ಕಾರ ಪ್ರತಿಪಾದಿಸಿತು.

ಟ್ರಂಪ್ ಹೇಳಿದ್ದನ್ನು ಮಾಧ್ಯಮಗಳು ನಿಮಗೆ ತೋರಿಸುವುದಿಲ್ಲ ಏಕೆಂದರೆ ಅದು ಮೋದಿ ಮತ್ತು ಅವರ ಸ್ನೇಹಪರ ವ್ಯವಹಾರ ಉದ್ಯಮಿಗಳ ಬಗ್ಗೆ ಮಾತ್ರ ಕಾಳಜಿ ವಹಿಸುತ್ತದೆ. ನನ್ನಂತಹ ಸ್ಟಾಲಿನ್ ಅಥವಾ ತೇಜಸ್ವಿಯವರಂತಹ ಜನರ ಬಗ್ಗೆ ಅಲ್ಲ ಎಂದು ಇಂದು ರಾಹುಲ್ ಗಾಂಧಿ ತಮ್ಮ ಮಾತಿನಲ್ಲಿ ಮಾಧ್ಯಮಗಳನ್ನು ಸಹ ದೂಷಿಸಿದರು.



# ನಟ-ರಾಜಕಾರಣಿ ದಳಪತಿ ವಿಜಯ್ ಬೌನ್ಸರ್ ಗಳಿಂದ ವ್ಯಕ್ತಿಯ ಮೇಲೆ ಹಲ್ಲೆ!?

## ವಿಜಯ್ ಬೌನ್ಸರ್‌ಗಳು ಹಲ್ಲೆ ನಡೆಸಿದ್ದಾರೆ ಎಂದು ದೂರು

ಮಧುರೈ: ತಮಿಳುನಾಡಿನ ಮಧುರೈನಲ್ಲಿ ನಡೆದ ಪಕ್ಷದ ಕಾರ್ಯಕ್ರಮವೊಂದರಲ್ಲಿ ಬೌನ್ಸರ್ ಗಳು ವ್ಯಕ್ತಿಯೊಬ್ಬನ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ಹಾಗೂ ನಟ ವಿಜಯ್ ವಿರುದ್ಧ ಪ್ರಕರಣ ದಾಖಲಾಗಿದೆ.

ನಟನನ್ನು ಹತ್ತಿರದಿಂದ ನೋಡಲು ಪ್ರಯತ್ನಿಸಿದಾಗ ವಿಜಯ್ ಬೌನ್ಸರ್‌ಗಳು ತಮ್ಮ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ದೂರುದಾರ ಶರತ್ ಕುಮಾರ್ ಆರೋಪಿಸಿದ್ದಾರೆ. 2026ರಲ್ಲಿ ನಡೆಯಲಿರುವ ತಮಿಳುನಾಡು ವಿಧಾನಸಭೆ ಚುನಾವಣೆಗೆ ಮುನ್ನ ಮಧುರೈನಲ್ಲಿ ವಿಜಯ್ ಅವರ ರಾಜಕೀಯ ರ್ಯಾಲಿಯಲ್ಲಿ ಈ ಘಟನೆ ನಡೆದಿದೆ.

ಸುದ್ದಿ ಸಂಸ್ಥೆ ಎಎನ್ಐ ಹಂಚಿಕೊಂಡ ಆಗಸ್ಟ್ 21 ರ ರ್ಯಾಲಿಯ ವೀಡಿಯೊದಲ್ಲಿ, ಟಿವಿಕೆ ಮುಖ್ಯಸ್ಥ ವಿಜಯ್ ರ್ಯಾಂಪ್ ವಾಕ್ ಮಾಡುವುದನ್ನು ಕಾಣಬಹುದು, ಆದರೆ ಬದಿಗಳಲ್ಲಿ ನೆರೆದಿದ್ದ ಲಕ್ಷಾಂತರ ಜನರು ವಿಜಯ್ ಅವರತ್ತ ಕೈ ಬೀಸಿ, ಘೋಷಣೆ ಕೂಗಿ ಹುರಿದುಂಬಿಸುತ್ತಾರೆ.

ಏಳು ನಿಮಿಷಗಳ ಅವಧಿಯ ವೀಡಿಯೊದ ಪ್ರಾರಂಭದಲ್ಲಿ, ಕನಿಷ್ಠ ಏಳು ಅಡಿ ಎತ್ತರದ ರ್ಯಾಂಪ್ ನಿಂದ ಒಬ್ಬ ವ್ಯಕ್ತಿಯನ್ನು ಎಸೆಯುವುದನ್ನು ಕಾಣಬಹುದು. ವಿಜಯ್ ನಡೆಯುತ್ತಿದ್ದಂತೆ ಅವರಿಗೆ ಶಾಲು ನೀಡಲು ಹಲವಾರು ಅಭಿಮಾನಿಗಳು ನುಗ್ಗುತ್ತಾರೆ. ಇದೇ ರೀತಿ ನುಗ್ಗಲು ಯತ್ನಿಸಿದ ವ್ಯಕ್ತಿಯನ್ನು ಬೌನ್ಸರ್‌ಗಳು ಹಿಡಿದು ಎಸೆದಿದ್ದಾರೆ ಎಂದು ದೂರುದಾರರು ಆರೋಪಿಸಿದ್ದಾರೆ.

ಈ ಸಂಬಂಧ ಅವರು ಮಂಗಳವಾರ ಪೆರಂಬಲೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ವಿಜಯ್ ಮತ್ತು ಅವರ ಬೌನ್ಸರ್‌ಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 189 (2), 296 (ಬಿ) ಮತ್ತು 115 (ಐ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಇದು ಕಾನೂನುಬಾಹಿರವಾಗಿ ಸೇರುವುದು ಮತ್ತು ಮರಣದಂಡನೆ ಅಥವಾ ಜೀವಾವಧಿ ಶಿಕ್ಷೆಗೆ ಗುರಿಯಾಗುವ ಅಪರಾಧಕ್ಕೆ ಕುಮ್ಮಕ್ಕು ನೀಡುವುದನ್ನು ಒಳಗೊಂಡಿರುತ್ತದೆ.

# ಮಹೇಶ್ ಶೆಟ್ಟಿ ತಿಮರೋಡಿ ಮನೆ ಮಹಜರು, ಪತ್ನಿ-ಮಕ್ಕಳ ಮೊಬೈಲ್ ವಶಕ್ಕೆ ,

## ಮನೆ ಮಹಜರು ವೇಳೆ ಮಾಸ್ಕ್-ಮ್ಯಾನ್ ಚಿನ್ನಯ್ಯ ಮೊಬೈಲ್ ಪತ್ತೆ

ದಕ್ಷಿಣ ಕನ್ನಡ: ಧರ್ಮಸ್ಥಳ ಪ್ರಕರಣದಲ್ಲಿ ಎಸ್‌ಐಟಿ ಅಧಿಕಾರಿಗಳು ತನಿಖೆ ತೀವ್ರಗೊಳಿಸಿದ್ದು, ಮಾಸ್ಕ್ ಮ್ಯಾನ್ ಚಿನ್ನಯ್ಯಗೆ ಪೂರ್ವಪರ ವಿಚಾರಣೆ ಬಳಿಕ ಇದೀಗ ಮಹೇಶ್ ಶೆಟ್ಟಿ ತಿಮರೋಡಿ ಮನೆಯಲ್ಲಿ ಮಹಜರು ಕಾರ್ಯ ನಡೆಸಿದ್ದಾರೆ.

ಧರ್ಮಸ್ಥಳದಲ್ಲಿ ಮಾಸ್ಕ್‌ಮ್ಯಾನ್ ಚಿನ್ನಯ್ಯ ಬಿಟ್ಟ ಬುರುಡೆ ಕೇಸ್‌ನ ಬಂಡವಾಳ ಬಗೆದಷ್ಟು ಬಯಲಾಗುತ್ತಿದ್ದು, ಧರ್ಮಸ್ಥಳ ವಿರುದ್ಧ ಅಪಪ್ರಚಾರ ಮಾಡಲು ಹಿಂದೂಗಳ ನಂಬಿಕೆ ಘಾಸಿಗೊಳಿಸಲು ಯತ್ನಿಸಲಾಗಿದೆ ಎಂದು ಆರೋಪಿಸಲಾಗಿದೆ. ಅರೆಸ್ಟ್ ಆಗಿರುವ ಚಿನ್ನಯ್ಯ ನೀಡಿದ ಮಾಹಿತಿ ಹಿನ್ನಲೆಯಲ್ಲಿ ಮಹೇಶ್ ಶೆಟ್ಟಿ ತಿಮರೋಡಿ ಮನೆ ಮೇಲೆ ಎಸ್‌ಐಟಿ ಅಧಿಕಾರಿಗಳು ದಾಳಿ ನಡೆಸಿದ್ದು, ಹಲವು ವಸ್ತುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ತಿಮರೋಡಿಯ ಪತ್ನಿ ಮತ್ತು ಮಕ್ಕಳ ಮೊಬೈಲ್ ಫೋನ್ ಗಳನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದು, ಇಷ್ಟೇ ಅಲ್ಲ ಮಹೇಶ್ ಶೆಟ್ಟಿ ತಿಮರೋಡಿ ಮನೆಯಿಂದ ಮೂರು ತಲವಾರು ವಶಕ್ಕೆ ಪಡೆಯಲಾಗಿದೆ ಎಂದು ಮಾಧ್ಯಮವೊಂದು ವರದಿ ಮಾಡಿದೆ. ಮಂಗಳವಾರ ತಡ ರಾತ್ರಿವರೆಗೂ ಅಧಿಕಾರಿಗಳು ಮಹೇಶ್ ಶೆಟ್ಟಿ ತಿಮರೋಡಿ ಮನೆಯಲ್ಲಿ ಶೋಧ ನಡೆಸಿದ್ದು, ಎಲ್ಲಾ ದಾಖಲೆಗಳನ್ನು ವಶಕ್ಕೆ ಪಡೆದು ರಿಪೋರ್ಟ್ ತಯಾರಿಸಿದ್ದಾರೆ. ಮಹೇಶ್ ಶೆಟ್ಟಿ ತಿಮರೋಡಿ ಮನೆಯಲ್ಲಿ ಪತ್ತೆಯಾದ ಮೂರು ತಲವಾರನ್ನು ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಮಹೇಶ್ ಶೆಟ್ಟಿ ತಿಮರೋಡಿ ಮನೆ ಮೇಲೆ ದಾಳಿ ಮಾಡುವ ಮೊದಲೇ ಮಹೇಶ್ ಶೆಟ್ಟಿ ಮನೆಯಿಂದ ತೆರಳಿದ್ದರು. ದಾಳಿ ವೇಳೆ ತಿಮರೋಡಿ ಮನೆಯಲ್ಲಿ ಇರಲಿಲ್ಲ. ಇತ್ತ ಮನೆ, ತೋಟ ಸೇರಿದಂತೆ ಎಲ್ಲಾ ಕಡೆ ಪರಿಶೋಧನೆ ನಡೆಸಿದ ಎಸ್‌ಐಟಿ ಅಧಿಕಾರಿಗಳು ಹಲವು ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ. ಮಹೇಶ್ ಶೆಟ್ಟಿ ಪತ್ನಿ, ಮಗ ಹಾಗೂ ಮಗಳ ಮೊಬೈಲ್ ಫೋನ್ ವಶಕ್ಕೆ ಪಡೆಯಲಾಗಿದೆ.

ಚಿನ್ನಯ್ಯನ 2 ಮೊಬೈಲ್ ಪತ್ತೆ: ಮಹೇಶ್ ಶೆಟ್ಟಿ ಮನೆಯಲ್ಲಿ ಉಳಿದುಕೊಂಡಿದ್ದ ಚಿನ್ನಯ ತನ್ನ ಎರಡೂ ಮೊಬೈಲ್ ಅಲ್ಲೆ ಇಟ್ಟಿದ್ದ. ವಿಚಾರಣೆ ವೇಳೆ ತನ್ನ ಬಳಿ ಮೊಬೈಲ್ ಇಲ್ಲ ಎಂದಿದ್ದ. ಮಹೇಶ್ ಶೆಟ್ಟಿ ತಿಮರೋಡಿ ಮನೆ ಶೋಧ ವೇಳೆ ಚಿನ್ನಯ್ಯನ ಎರಡು ಮೊಬೈಲ್ ಪತ್ತೆಯಾಗಿವೆ.

ಒಂದು ಕೀಪ್ಯಾಡ್ ಮೊಬೈಲ್ ಮತ್ತೊಂದು ಆ್ಯಂಡ್ರಾಯ್ಡ್ ಮೊಬೈಲ್. ಆರಂಭದಲ್ಲಿ ಕೀ ಪ್ಯಾಡ್ ಮೊಬೈಲ್ ಬಳಸುತ್ತಿದ್ದ ಚಿನ್ನಯ್ಯ, ಬಳಿಕ ಆ್ಯಂಡ್ರಾಯ್ಡ್ ಮೊಬೈಲ್ ಫೋನ್ ಬಳಸಲು ಆರಂಭಿಸಿದ್ದ. ಕಳೆದ ಕೆಲ ತಿಂಗಳುಗಳಿಂದ ಆ್ಯಂಡ್ರಾಯ್ಡ್ ಫೋನ್ ಬಳಕೆ ಮಾಡುತ್ತಿದ್ದ. ಇದರ ಜೊತೆಗೆ ಚಿನ್ನಯ್ಯನ ಲಗೇಜ್ ಬ್ಯಾಗ್, ಬೆನ್ನ ಹಿಂದೆ ಹಾಕುವ ಬ್ಯಾಗ್, ಬಟ್ಟೆ ಸೇರಿದಂತೆ ಕೆಲ ದಾಖಲೆಯನ್ನು ವಶಪಡಿಸಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಇನ್ನು ಚಿನ್ನಯ್ಯ ಬಳಸುತ್ತಿದ್ದ ಆಂಡ್ರಾಯ್ಡ್ ಮೊಬೈಲ್, ಸಿಸಿಕ್ಯಾಮರಾ ಹಾರ್ಡ್‌ಡಿಸ್ಕ್, ಮಹತ್ವದ ದಾಖಲೆಗಳು, ಚಿನ್ನಯ್ಯನ ಬಟ್ಟೆ ಬ್ಯಾಗ್ ವಶಪಡಿಸಿಕೊಳ್ಳಲಾಗಿದೆ. ಮಾಸ್ಕ್‌ಮ್ಯಾನ್‌ನ ಐಡಿಕಾರ್ಡ್ ಸೇರಿ ಎಲ್ಲ ವಸ್ತುಗಳ ವಿವರ ಬರೆದಿರೋ ಅಧಿಕಾರಿಗಳು, FSLಗೆ ಕಳುಹಿಸಲಿದ್ದಾರೆ.

# ಚಾಮುಂಡಿ ಬೆಟ್ಟ ಹಿಂದೂ ಧರ್ಮದ ಆಸ್ತಿಯಲ್ಲ: ಡಿಕೆ ಶಿವಕುಮಾರ್ ಹೇಳಿಕೆಗೆ ಯದುವೀರ್ ಖಂಡನೆ

## ಎಲ್ಲ ಸಮಾಜದವರು ಚಾಮುಂಡಿ ಬೆಟ್ಟಕ್ಕೆ ಹೋಗುತ್ತಾರೆ.

ಬೆಂಗಳೂರು: ಚಾಮುಂಡಿ ಬೆಟ್ಟ, ಚಾಮುಂಡಿ ದೇವರು ಹಿಂದೂಗಳ ಆಸ್ತಿ ಅಲ್ಲ, ಎಲ್ಲಾ ಧರ್ಮದವರಿಗೂ ಸೇರಿದ್ದು ಎಂದು ಉಪ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರು ಬುಧವಾರ ಹೇಳಿದ್ದು, ಹೇಳಿಕೆಯನ್ನು ಸಂಸದ ಹಾಗೂ ಮೈಸೂರು ರಾಜವಂಶಸ್ಥರೂ ಆಗಿರುವ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಖಂಡಿಸಿದ್ದಾರೆ.




ಮೈಸೂರು ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಸ್ತಾಕ್ ಅವರಿಗೆ ಆಹ್ವಾನ ನೀಡಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿರುವ ಡಿಕೆ ಶಿವಕುಮಾರ್ ಅವರು, ಚಾಮುಂಡಿ ಬೆಟ್ಟ ಹಿಂದೂ ಧರ್ಮದ ಆಸ್ತಿಯಲ್ಲ' ಎಂದು ವಿವಾದಿತ ಹೇಳಿಕೆ ನೀಡಿದ್ದಾರೆ. ಚಾಮುಂಡಿ ಬೆಟ್ಟಕ್ಕೆ ಎಲ್ಲ ಧರ್ಮದವರಿಗೂ ಪ್ರವೇಶವಿದೆ. ಎಲ್ಲ ಸಮಾಜದವರು ಚಾಮುಂಡಿ ಬೆಟ್ಟಕ್ಕೆ ಹೋಗುತ್ತಾರೆ. ದೇವರ ಬಳಿ ಪ್ರಾರ್ಥನೆ ಮಾಡಿಕೊಳ್ಳುತ್ತಾರೆ. ಮಸೀದಿ, ದರ್ಗಾಗಳಿಗೆ, ಜೈನರ ಬಸದಿಗಳಿಗೆ, ಚರ್ಚ್, ಗುರುದ್ವಾರಗಳಿಗೆ ನಾವು ಹೋಗುವುದನ್ನು ಯಾರಾದರೂ ತಡೆದಿದ್ದಾರೆಯೇ? ಹಿಂದೂ ದೇವಸ್ಥಾನಗಳಿಗೆ ಅವರುಗಳು ಬರುವುದನ್ನು ನಾವು ವಿರೋಧಿಸಿದ್ದೇವೆಯೇ? ಯಾವುದೇ ಶ್ರದ್ಧಾ ಕೇಂದ್ರಗಳಿಗೆ ಯಾರು ಬೇಕಾದರೂ ಹೋಗಿ ಬರಬಹುದು' ಎಂದು ಹೇಳಿದರು.




'ಎಷ್ಟೋ ಜನ ಹಿಂದೂಗಳು ಮುಸ್ಲಿಮರಾಗಿ, ಕ್ರಿಶ್ಚಿಯನ್ನರಾಗಿ ಹಾಗೂ ಬೇರೆ ಧರ್ಮದವರು ಹಿಂದೂಗಳಾಗಿ ಮತಾಂತರ ಆಗಿಲ್ಲವೇ? ಮುಸ್ಲಿಮರು ಹಿಂದೂ ಧರ್ಮದ ಆಚರಣೆಗಳನ್ನು ಮಾಡುತ್ತಿಲ್ಲವೇ? ಅಯೋಧ್ಯೆಯ ರಾಮನ ದರ್ಶನಕ್ಕೆ ಹಿಂದೂಗಳು ಮಾತ್ರ ಬರಬೇಕು ಎಂದು ಏಕೆ ಫಲಕ ಹಾಕಿಲ್ಲ? ಬಿಜೆಪಿ ಸರ್ಕಾರ ಇದ್ದ ವೇಳೆ ಹಾಗೂ ಈಗ ಇಡೀ ದೇಶದಲ್ಲಿ ಹಜ್ ಸಮಿತಿ, ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆಗಳನ್ನು ಏಕೆ ರದ್ದು ಮಾಡಲಿಲ್ಲ? ಇದೆಲ್ಲವೂ ರಾಜಕೀಯ'

ಬಿಜೆಪಿಯವರು 'ಧರ್ಮದ ರಾಜಕೀಯ' ಮಾಡುವ ಬದಲು 'ಧರ್ಮದಲ್ಲಿ ರಾಜಕೀಯ ಮಾಡುತ್ತಿದ್ದಾರೆ. ಧರ್ಮಸ್ಥಳದಂತಹ ಪವಿತ್ರ ಕ್ಷೇತ್ರವನ್ನೂ ಅಶುದ್ಧಗೊಳಿಸಲು ಮುಂದಾಗಿದ್ದಾರೆ. ಈ ಕ್ಷೇತ್ರ ಯಾವುದೇ ಕಾರಣಕ್ಕೂ ರಾಜಕೀಯಕ್ಕೆ ಬಲಿಯಾಗಬಾರದು.

ಪುಟ 2ಕ್ಕೆ.....

# ಕೇಸರಿ ಶಾಲು ಹಾಕಿದ್ದ ಕೂಲಿ ಕಾರ್ಮಿಕನ ಮೇಲೆ ಹಲ್ಲೆ

## ಕೇಸರಿ ಶಾಲು ಯಾಕೆ ಹಾಕೊಂಡಿದ್ದಿಯ ಇಂದು ಇಬ್ಬರಿಂದ ಹಲ್ಲೆ!!

ಬೆಂಗಳೂರು: ಕೇಸರಿ ಶಾಲು ಹಾಕಿಕೊಂಡು ಕೆಲಸ ಮಾಡುತ್ತಿದ್ದ ಕೂಲಿ ಕಾರ್ಮಿಕನೊಬ್ಬನ ಮೇಲೆ ಅನ್ಯಕೋಮಿನ ಯುವಕರು ಹಲ್ಲೆ ನಡೆಸಿರುವ ಘಟನೆಯೊಂದು ನಗರದ ಕಲಾಸಿಪಾಳ್ಯದಲ್ಲಿ ಭಾನುವಾರ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಕೂಲಿ ಕೆಲಸ ಮಾಡುತ್ತಿದ್ದ ಸ್ಲಿಂಧರ್ ಕುಮಾರ್ ಎಂಬಾತ ಟ್ರಾವೆಲ್ಸ್ ಕಂಪನಿಯಲ್ಲಿ ಲೋಡಿಂಗ್ ಮತ್ತು ಅನ್‌ಲೋಡಿಂಗ್ ಕೆಲಸ ಮಾಡುತ್ತಿದ್ದು, ಈತನ ಮೇಲೆ ಆ.24 ರಂದು ರಾತ್ರಿ 9.30ರ ಸುಮಾರಿಗೆ ಹಲ್ಲೆ ನಡೆದಿದೆ ಎಂದು ತಿಳಿದುಬಂದಿದೆ.

ಕೇಸರಿ ಶಾಲು ಯಾಕೆ ಹಾಕಿಕೊಂಡಿದ್ದೀಯಾ ಎಂದು ಇಬ್ಬರು ಅಪರಿಚಿತ ಯುವಕರು ಸ್ಲಿಂಧರ್ ಕುಮಾರ್ ಅವರನ್ನು ಪ್ರಶ್ನೆ ಮಾಡಿದ್ದಾರೆ, ಈ ಸಂದರ್ಭದಲ್ಲಿ ಯಾಕೆ ಆತನ ಮೇಲೆ ಹಲ್ಲೆ ಮಾಡುತ್ತಿದ್ದೀರಾ ಎಂದು ತಡೆಯಲು ಬಂದ ಟ್ರಾವೆಲ್ಸ್ ಮಾಲೀಕನ ಮೇಲೂ ಗಲಾಟೆ ಮಾಡಿದ್ದಾರೆ ಎನ್ನಲಾಗಿದೆ. ಕೇಸರಿ ಶಾಲು ಯಾಕೋ ಹಾಕಿದ್ದೀಯಾ? ಎಂದು ಬೈದು, ಬಟ್ಟೆ ಹರಿದು ಹಾಕಿದ್ದಾರೆಂದು ತಿಳಿದುಬಂದಿದೆ.

ಘಟನೆ ಬೆನ್ನಲ್ಲೇ ರಾಯಲ್ ಟ್ರಾವೆಲ್ಸ್ ಸಾರಿಗೆ ಕಚೇರಿಯ ವ್ಯವಸ್ಥಾಪಕ ಹರಿಕೃಷ್ಣ ಅವರು ಕಲಾಸಿಪಾಳ್ಯ ಠಾಣೆಗೆ ದೂರು ನೀಡಿದ್ದು, ದೂರು ದಾಖಲಿಸಿಕೊಂಡಿದ್ದ ಪೊಲೀಸರು ಇದೀಗ ಮೂವರು ಆರೋಪಿಗಳನ್ನು ಬಂಧನಕ್ಕೊಳಪಡಿಸಿದ್ದಾರೆ. ಬಂಧಿತನ್ನು ಮೆಕ್ಯಾನಿಕ್ ಆಗಿರುವ ನಾಗವಾರ ನಿವಾಸಿ ಎಂ. ತಬ್ರೇಜ್ (30), ರೇಡಿಯಂ ಕತ್ತರಿಸುವ ಕೆಲಸ ಮಾಡುತ್ತಿರುವ ಬನಶಂಕರಿ ನಿವಾರಿ ಡಬ್ಲ್ಯು. ಇಮ್ರಾನ್ ಖಾನ್ (35), ರಿಯಲ್ ಎಸ್ಟೇಟ್ ವ್ಯವಹಾರ ನಡೆಸುತ್ತಿರುವ ಕೃಷ್ಣಪ್ಪ ಗಾರ್ಡನ್ ನಿವಾಸಿ ಅಜೀಜ್ ಖಾನ್ (37) ಎಂದು ಗುರ್ತಿಸಲಾಗಿದೆ.

ಸಂಪರ್ಕಿಸಿ: 9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ಡಿಕೆ ಶಿವಕುಮಾರ್ ಹೇಳಿಕೆ ಖಂಡಿಸಿದ ಸಂಸದ ಯದುವೀರ್

ಪುಟ 1ರಿಂದ

ದಕ್ಷಿಣ ಭಾರತದ ಲಕ್ಷಾಂತರ ಭಕ್ತರ ನಂಬಿಕೆ ಇರುವ ಈ ಕ್ಷೇತ್ರ್ರವನ್ನು ದುರ್ಬಲಗೊಳಿಸಲು ಅವಕಾಶ ಕೊಡಬಾರದು ಎಂದು ನಾನು ಹೆಗಡೆಯವರಲ್ಲಿ ಮನವಿ ಮಾಡುತ್ತೇನೆ ಎಂದರು. ಧರ್ಮಸ್ಥಳದ ಪ್ರಕರಣವು ಬಿಜೆಪಿಯ ಎರಡು ಬಣಗಳ ನಡುವಿನ ಆಂತರಿಕ ಕಿತ್ತಾಟದಿಂದ ನಡೆಯುತ್ತಿದೆ. ಭಕ್ತಾದಿಗಳನ್ನು ಮುಂದಿಟ್ಟುಕೊಂಡು ರಾಜಕೀಯ ಮಾಡಬಾರದು. ಭಕ್ತರ ನಂಬಿಕೆಗೆ ಲೋಪ ಬಾರದಂತೆ ನಡೆದುಕೊಳ್ಳಬೇಕು.

ಬಿಜೆಪಿಯ ಸಭೆಗಳು ಧರ್ಮದ ಸಭೆಗಳಲ್ಲ, ಅವು ರಾಜಕೀಯ ಸಭೆಗಳು. ಇಲ್ಲಿಯವರೆಗೆ ಬಂಧಿತರಾಗಿರುವವರೆಲ್ಲರೂ ಬಿಜೆಪಿಯವರೇ ಆಗಿದ್ದಾರೆ ಎಂದು ಹೇಳಿದರು. ನಮ್ಮ ಸಂವಿಧಾನದ ಮೂಲಕ ಎಲ್ಲರಿಗೂ ಅವಕಾಶ, ಸ್ವಾತಂತ್ರ್ಯ ಕಲ್ಪಿಸಲಾಗಿದೆ. ಎಲ್ಲರಿಗೂ ಅವರವರ ನಂಬಿಕೆ ಮೇಲೆ ವಿಶ್ವಾಸವಿದೆ. ಮುಸ್ಲಿಂ ಅಥವಾ ಕ್ರಿಶ್ಚಿಯನ್ ಹೆಣ್ಣು, ಹಿಂದು ಅಥವಾ ಇತರೇ ಧರ್ಮದ ಗಂಡಿಗೆ ಜನಿಸಿದ ಮಕ್ಕಳು ತಮಗೆ ಬೇಕಾದ್ದನ್ನು ಅನುಸರಿಸುತ್ತಾರೆ ಎಂದು ತಿಳಿಸಿದರು.

## ಡಿಕೆ.ಶಿವಕುಮಾರ್ ಅವರ ಹೇಳಿಕೆಯನ್ನು ಮೈಸೂರು-ಕೊಡಗು ಸಂಸದ ಯದುವೀರ್ ಒಡೆಯರ್ ಅವರು ಖಂಡಿಸಿದ್ದಾರೆ.

ಈ ಹೇಳಿಕೆ ಖಂಡನೀಯ ಹಾಗೂ ನಿಂದನೀಯ. ಚಾಮುಂಡಿ ಬೆಟ್ಟ ಶಕ್ತಿಪೀಠ ಶಾಸ್ತ್ರಸಮ್ಮತ ಕೋಟ್ಯಂತರ ಹಿಂದೂಗಳ ಪವಿತ್ರ ಸ್ಥಳ. ಕಾಂಗ್ರೆಸ್ ಯಾವಾಗಲೂ ಹಿಂದೂಗಳ ಭಾವನೆಗಳಿಗೆ ಧಕ್ಕೆ ತಂದು ನಕಲಿ ಸೆಕ್ಯುಲರಿಸಂ ಪ್ರದರ್ಶನ ಮಾಡುತ್ತದೆ. ಕರ್ನಾಟಕದ ಜನ ಎಲ್ಲ ಧರ್ಮಗಳನ್ನೂ ಗೌರವಿಸುತ್ತಾರೆ. ಆದರೆ, ಹಿಂದೂ ಹಬ್ಬಗಳು, ಸಂಪ್ರದಾಯಗಳು ದೇವಾಲಯಗಳ ಮೇಲೆ ನಿರಂತರವಾಗಿ ನಡೆಯುತ್ತಿರುವ ದಾಳಿಯನ್ನು ಸಹಿಸುವುದಿಲ್ಲ ಎಂದಿದ್ದಾರೆ. ಈ ದೇವಸ್ಥಾನದ ಮೇಲೆ ಜಾತ್ಯತೀತ ಪಟ್ಟಿಯನ್ನು ಹಾಕುವ ಅವಶ್ಯಕತೆ ಇಲ್ಲ. ಇದು ಸಹಜವಾಗಿಯೇ ಬಹುತ್ವದ ತತ್ವದ ಮೇಲೆ ಇರುವುದರಿಂದ ಆಧುನಿಕತೆಯ ಕಾಲದಲ್ಲಿ ಜಾತ್ಯಾತೀತವಾಗಿ ನೋಡಬಹುದು. ಆದರೆ, ಇದು ಭಾರತೀಯ ಧರ್ಮ, ಹಿಂದೂ ಧರ್ಮಕ್ಕೆ ಸೇರಿರುವಂತಹ ಶಕ್ತಿ ಪೀಠ. ಕೋಟ್ಯಂತರ ಮಂದಿ ಚಾಮುಂಡಿ ತಾಯಿಯ ಮೇಲಿನ ನಂಬಿಕೆಯಿಂದ ಬರುತ್ತಾರೆ, ಒಳಿತಾಗಲೆಂದು ಪ್ರಾರ್ಥಿಸುತ್ತಾರೆ. ಡಿಕೆ.ಶಿವಕುಮಾರ್ ಅವರ ಹೇಳಿಕೆ ಖಂಡನೀಯವಾದುದು. ಮುಂದೆ ಅವರು ಇಂತಹ ಬೇಜವಾಬ್ದಾರಿ ಹೇಳಿಕೆಗಳನ್ನು ನೀಡಬಾರದು.

'ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ರಚನೆ ಮೂಲಕ ಚಾಮುಂಡಿ ಬೆಟ್ಟವನ್ನು ಅವರ ನಿಯಂತ್ರಣಕ್ಕೆ ತೆಗೆದುಕೊಳ್ಳಲು ಪ್ರಯತ್ನ ಮಾಡಿದ್ದಾರೆ. ಬೆಂಗಳೂರಿನ ಗಾಳಿ ಆಂಜನೇಯ ದೇವಸ್ಥಾನವನ್ನೂ ಸರ್ಕಾರದ ನಿಯಂತ್ರಣಕ್ಕೆ ತೆಗೆದುಕೊಂಡಿದ್ದಾರೆ. ಹಿಂದೂ ದೇವಾಲಯಗಳನ್ನು ಮಾತ್ರವೇ ಗುರಿಯಾಗಿಟ್ಟುಕೊಂಡು ಸರ್ಕಾರದ ನಿಯಂತ್ರಣಕ್ಕೆ ತೆಗೆದುಕೊಳ್ಳುತ್ತಿದ್ದಾರೆ. ಜೊತೆಗೆ, ಹಿಂದೂ ಧರ್ಮಕ್ಕೆ ಧಕ್ಕೆ ತರುವಂತಹ ಹೇಳಿಕೆಗಳನ್ನು ಕೊಡುವುದು ಈ ಕಾಂಗ್ರೆಸ್ ಸರ್ಕಾರದಲ್ಲಿ ಹೆಚ್ಚಾಗುತ್ತಾ ಬಂದಿದೆ. ಇದು ನಿಜಕ್ಕೂ ಖಂಡನೀಯ ಬೆಳವಣಿಗೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

'ಡಿ.ಕೆ. ಶಿವಕುಮಾರ್ ಅವರು ಅಧಿವೇಶನದಲ್ಲಿ ಆರ್‌ಎಸ್‌ಎಸ್ ಗೀತೆ ಹೇಳಿದ್ದರು. ಆರ್‌ಎಸ್‌ಎಸ್ ಪದ್ಧತಿ ಬಗ್ಗೆ ಕಾಳಜಿ ಹಾಗೂ ಜಾಗೃತಿ ಇದೆ ಎಂದಿದ್ದರು. ಅದಕ್ಕೆ ಅವರ ಪಕ್ಷದಿಂದ ಹಾಗೂ ಬೆಂಬಲಿಗರಿಂದ ವ್ಯಕ್ತವಾದ ಕಾರಣ ಕ್ಷಮೆ ಕೇಳುತ್ತೇನೆ ಎಂದು ಹೇಳಿದ್ದಾರೆ. ಅದನ್ನು ಮುಚ್ಚಿ ಹಾಕಿಕೊಳ್ಳಲು, ಸಮತೋಲನ ಮಾಡುವುದಕ್ಕಾಗಿ ಹಾಸ್ಯಾಸ್ಪದ ಹೇಳಿಕೆ ನೀಡಿ ಹಿಂದೂಗಳ ಭಾವನೆಗೆ ಧಕ್ಕೆ ತರುವಂತಹ ಕೆಲಸ ಮಾಡುತ್ತಿದ್ದಾರೆ' ಎಂದು ಟೀಕಿಸಿದರು. 'ರಾಜ್ಯದಲ್ಲಿ ಅನೇಕ ಗಂಭೀರವಾದ ಸಮಸ್ಯೆಗಳಿವೆ. ಆದರೆ, ಈ ಸರ್ಕಾರದವರು ಅವುಗಳನ್ನು ಮರೆಮಾಚಲು ಹಾಸ್ಯಾಸ್ಪದ ಹೇಳಿಕೆಗಳನ್ನು ನೀಡಿ ಜನರ ಗಮನ ಬೇರೆಡೆ ಸೆಳೆಯುತ್ತಿದ್ದಾರೆಂದು ಹೇಳಿದರು.

# ಡಿಕೆ ಶಿವಕುಮಾರ್ ಹಿಂದೂ ಜನರ ಭಾವನೆಗಳಿಗೆ ನೋವುಂಟು ಮಾಡಿದ್ದು ಕ್ಷಮೆಯಾಚಿಸಬೇಕು: ಶೋಭಾ ಕರಂದ್ಲಾಜೆ

ನವದೆಹಲಿ: ಮೈಸೂರು ಚಾಮುಂಡಿ ಬೆಟ್ಟದ ಕುರಿತು ಡಿಸಿಎಂ ಡಿ ಕೆ ಶಿವಕುಮಾರ್ ಹೇಳಿಕೆಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಂದು ದೆಹಲಿಯಲ್ಲಿ ಪತ್ರಿಕಾಗೋಷ್ಠಿಯೊಂದನ್ನು ನಡೆಸಿ ಕರ್ನಾಟಕ ಸರ್ಕಾರವನ್ನು ಅದರಲ್ಲೂ ನಿರ್ದಿಷ್ಟವಾಗಿ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ತರಾಟೆಗೆ ತೆಗೆದುಕೊಂಡರು. ಚಾಮುಂಡಿಬೆಟ್ಟ ಹಿಂದೂಗಳಿಗೆ ಮಾತ್ರ ಸೇರಿದ್ದಲ್ಲ ಎಂದು ಶಿವಕುಮಾರ್ ಹೇಳುತ್ತಾರೆ.

ಇತ್ತೀಚೆಗೆ ಅವರು ವಿಧಾನಸಭಾ ಅಧಿವೇಶನದಲ್ಲಿ ಆರೆಸ್ಸೆಸ್ ಪ್ರಾರ್ಥನಾ ಗೀತೆಯನ್ನು ಹಾಡಿ ವಿವಾದ ಸೃಷ್ಟಿಸಿದ್ದರು, ಆದರೆ ಅವರು ಹಾಗೆ ಮಾಡಿದ್ದು ದೆಹಲಿಯಲ್ಲಿರುವ ವರಿಷ್ಠರನ್ನು ಕೆರಳಿಸಿತ್ತು ಎಂದು ಹೇಳಿದರು. ಹೈಕಮಾಂಡ್ ಗಮನ ಆ ವಿಷಯದಿಂದ ಬೇರೆಡೆ ಸೆಳೆಯಲು ಶಿವಕುಮಾರ್ ಚಾಮುಂಡಿ ಬೆಟ್ಟ ಹಿಂದೂಗಳಿಗೆ ಮಾತ್ರ ಸೇರಿದ್ದಲ್ಲ ಅಂತ ಹೇಳಿದ್ದಾರೆ, ಅವರ ಮಾತಿನ ಅರ್ಥವೇನು ಎಂದು ಕಿಡಿಕಾರಿದ್ದಾರೆ. ಚಾಮುಂಡಿ ತಾಯಿ ಈ ನಾಡಿನ ಹಿಂದೂಗಳ ಪಾಲಿನ ಅಧಿದೇವತೆ, ಪೂಜನೀಯಳು, ದಸರಾ ಸಮಯದಲ್ಲಿ ಚಾಮುಂಡಿಗೆ ಪೂಜೆ ಮಾಡಿಯೇ ಮುನ್ನುಡಿ ಇಡಲಾಗುತ್ತದೆ. ತಮ್ಮ ಹೈಕಮಾಂಡ್ ನ್ನು ಸಮಾಧಾನಗೊಳಿಸಲು, ಖುಷಿಪಡಿಸಲು ಡಿ ಕೆ ಶಿವಕುಮಾರ್ ಈ ರೀತಿ ಹೇಳಿಕೆ ನೀಡಿದ್ದಾರೆ ಎಂದರು. ಹಿಂದೂ ಜನರ ಭಾವನೆಗಳಿಗೆ ತಮ್ಮ ಮಾತಿನ ಮೂಲಕ ನೋವುಂಟುಮಾಡಿರುವ ಡಿ ಕೆ ಶಿವಕುಮಾರ್ ಕ್ಷಮೆಯಾಚಿಸಬೇಕು ಎಂದರು.

## ಹದಗೆಟ್ಟ ರಸ್ತೆಗಳ ದುರಸ್ತಿ ಕಾರ್ಯಕ್ಕೆ ಸಮಯ ನಿಗದಿಪಡಿಸಿ; ತುಷಾರ್ ಗಿರಿನಾಥ್



ಬೆಂಗಳೂರು: ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯೂಎಸ್‌ಎಸ್‌ಬಿ) ಅಗೆದ ರಸ್ತೆಗಳನ್ನು ದುರಸ್ತಿ ಮಾಡಲು ಸಮಯ ನಿಗದಿಪಡಿಸುವಂತೆ ಅಧಿಕಾರಿಗಳಿಗೆ ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮತ್ತು ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್ ಗಿರಿನಾಥ್ ಅವರು ಮಂಗಳವಾರ ಸೂಚನೆ ನೀಡಿದ್ದಾರೆ. ರಸ್ತೆ ಮತ್ತು ಇತರ ನಾಗರಿಕ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆಗಾಗಿ ಶುಕ್ರವಾರ ವಿಕಾಸಸೌಧದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕುಡಿಯುವ ನೀರು ಮತ್ತು ಒಳಚರಂಡಿ ಮಾರ್ಗಗಳನ್ನು ಹಾಕಲು ಬಿಡಬ್ಲ್ಯೂಎಸ್‌ಎಸ್‌ಬಿ ರಸ್ತೆಗಳನ್ನು ಅಗೆಯುತ್ತಿದೆ. ಆದರೆ, ದುರಸ್ತಿ ಕಾರ್ಯಗಳನ್ನು ಕೈಗೆತ್ತಿಕೊಳ್ಳುತ್ತಿಲ್ಲ ಎಂದು ಕಿಡಿಕಾರಿದರು.

ಈ ರಸ್ತೆಗಳನ್ನು ದುರಸ್ತಿ ಮಾಡಲು ಮತ್ತು ಅದಕ್ಕೆ ಅನುಗುಣವಾಗಿ ವೇಳಾಪಟ್ಟಿಯನ್ನು ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು. ನಗರದ ವಿವಿಧ ಭಾಗಗಳಲ್ಲಿ ಸುಮಾರು 7.3 ಕಿ.ಮೀ ರಸ್ತೆಗಳು ಹಾನಿಗೊಳಗಾಗಿವೆ. ದುರಸ್ತಿಗಾಗಿ ನಿರ್ದಿಷ್ಟ ರಸ್ತೆಗಳನ್ನು ಗುರುತಿಸಿ ಪಟ್ಟಿ ಮಾಡಿ. ತಕ್ಷಣ ಕಾಮಗಾರಿ ಕೆಲಸ ಪ್ರಾರಂಭಿಸಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಇದೇ ವೇಳೆ ಪಾದಚಾರಿ ಮಾರ್ಗಗಳು ಮತ್ತು ರಸ್ತೆಬದಿಗಳಲ್ಲಿ ಪ್ರಸ್ತುತ ಅಳವಡಿಸಲಾಗಿರುವ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಳಾಂತರಿಸುವಂತೆ ಬೆಸ್ಕಾಂಗೆ ನಿರ್ದೇಶನ ನೀಡಿದರು. ರಸ್ತೆ ಗುಂಡಿಗಳನ್ನು ಸರಿಪಡಿಸಲು ಮತ್ತು ಸುಧಾರಣಾ ಕಾರ್ಯವನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆಯೂ ಅಧಿಕಾರಿಗಳಿಗೆ ಸೂಚನೆ ನೀಡಿದರು.

## ಸೆ.12ಕ್ಕೆ ತೇಜ ಸಜ್ಜಾ ನಟನೆಯ ಮಿರಾಯ್ ತೆರೆಗೆ ಎಂಟ್ರಿ

'ಹನುಮಾನ್' ಮೂಲಕ ಸಾಕಷ್ಟು ಜನಪ್ರಿಯರಾಗಿರುವ ಟಾಲಿವುಡ್ ನಟ ತೇಜ ಸಜ್ಜಾ ನಟನೆಯ ಬಹು ನಿರೀಕ್ಷಿತ ಸಿನಿಮಾ ಮಿರಾಯ್. ಹನುಮಾನ್ ಚಿತ್ರದ ಬಳಿಕ ತೇಜ ಒಪ್ಪಿಕೊಂಡಿರುವ ಮತ್ತೊಂದು ಸೂಪರ್ ಹೀರೋ ಚಿತ್ರ ಇದಾಗಿದೆ. ಸ್ಯಾಂಪಲ್ಸ್ ಮೂಲಕ ನಿರೀಕ್ಷೆ ಹೆಚ್ಚಿರುವ ಮಿರಾಯ್ ಸಿನಿಮಾ ಸೆಪ್ಟೆಂಬರ್ 12ರಂದು ತೆರೆಗೆ ಬರ್ತಿದೆ.

**ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

## ರೈಲ್ವೆ ಸಿಬ್ಬಂದಿಯ ಸಹಾಯದಿಂದ ಮಹಿಳೆಗೆ ಹೆರಿಗೆ

ಬೆಂಗಳೂರು: ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ನಲ್ಲಿ ರೈಲುಗಾಗಿ ಕಾಯುತ್ತಿದ್ದ ಮಹಿಳೆಯೊಬ್ಬರು ಸಹ ಪ್ರಯಾಣಿಕರು ಮತ್ತು ರೈಲ್ವೆ ಸಿಬ್ಬಂದಿಯ ಸಕಾಲಿಕ ಸಹಾಯದಿಂದ ಪ್ಲಾಟ್‌ಫಾರ್ಮ್‌ನಲ್ಲಿ ಗಂಡು ಮಗುವಿಗೆ ಜನ್ಮ ನೀಡಿದರು. ತಾಯಿ ಮತ್ತು ನವಜಾತ ಶಿಶು ಇಬ್ಬರೂ ಆರೋಗ್ಯವಾಗಿದ್ದಾರೆ ಎಂದು ವರದಿಯಾಗಿದೆ. ರೈಲು ಸಂಖ್ಯೆ 12836 SMVT ಬೆಂಗಳೂರು-ಹಟಿಯಾ ಎಕ್ಸ್‌ಪ್ರೆಸ್‌ನಲ್ಲಿ ಹಟಿಯಾಗೆ ತೆರಳುತ್ತಿದ್ದ 23 ವರ್ಷದ ಅರ್ಚನಾ ಕುಮಾರಿ ಅವರಿಗೆ ತೀವ್ರ ಹೆರಿಗೆ ನೋವು ಕಾಣಿಸಿಕೊಂಡಿತು. ಈ ವೇಳೆ ರೈಲು ತಂಡದ ಭಾಗವಾಗಿ ಕರ್ತವ್ಯದಲ್ಲಿದ್ದ ಆರ್‌ವಿ ಸುರೇಶ್ ಬಾಬು ಅವರು ವೈದ್ಯಕೀಯ ಸಹಾಯಕ್ಕಾಗಿ ಕಮರ್ಷಿಯಲ್ ಕಂಟ್ರೋಲ್ ಗೆ ತಕ್ಷಣ ಮಾಹಿತಿ ನೀಡಿದರು.

ಉಪ ಸ್ಟೇಷನ್ ಮಾಸ್ಟರ್ (ವಾಣಿಜ್ಯ), ರೈಲ್ವೆ ರಕ್ಷಣಾ ಪಡೆ (RPF) ಸಿಬ್ಬಂದಿ ಮತ್ತು ಮಹಿಳಾ ರೈಲ್ವೆ ಸಿಬ್ಬಂದಿಯೊಂದಿಗೆ, ಮಹಿಳೆಯನ್ನು ನಿಲ್ದಾಣದೊಳಗಿನ ಸುರಕ್ಷಿತ ಮತ್ತು ಖಾಸಗಿ ಆವರಣಕ್ಕೆ ಸ್ಥಳಾಂತರಿಸಿದರು. ಗುರುವಾರ ಬೆಳಿಗ್ಗೆ 8.30 ರ ಸುಮಾರಿಗೆ, ಅರ್ಚನಾ ಕುಮಾರಿ ಗಂಡು ಮಗುವಿಗೆ ಜನ್ಮ ನೀಡಿದರು. ಹೆರಿಗೆಯ ನಂತರ, ತಾಯಿ ಮತ್ತು ಮಗುವನ್ನು ಹೆಚ್ಚಿನ ಆರೈಕೆಗಾಗಿ ಸಿವಿ ರಾಮನ್ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅರ್ಚನಾ ಕುಮಾರಿ ಅವರ ಪತಿ ನಿಶಾಂಕ್ ಕುಮಾರ್, ರೈಲ್ವೆ ಅಧಿಕಾರಿಗಳು ಮತ್ತು ಸಿಬ್ಬಂದಿಯ ಸಕಾಲಿಕ ಸಹಾಯಕ್ಕಾಗಿ ಕೃತಜ್ಞತೆ ಸಲ್ಲಿಸಿದರು.

## ಸ್ಟಾರ್ಟಪ್ ಉದ್ಯಮಿ ಅನಿಲ್ ಶೆಟ್ಟಿ ಅವರ ಮೊದಲ ಚಿತ್ರ, ಲಂಬೋದರ 2.0 ಟೈಟಲ್ ಬಿಡುಗಡೆ.

ಗಣೇಶ ಚತುರ್ಥಿಯ ದಿನದಂದು ವಿಭಿನ್ನ ವಿಡಿಯೋ ಟೀಸರ್ ಬಿಡುಗಡೆ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಟೈಟಲ್ ಹಂಚಿಕೊಂಡ ಅನಿಲ್ ಶೆಟ್ಟಿ. ಗಣೇಶನ ಹೆಸರಿನಲ್ಲಿ ಸಿನೆಮಾಗಳು ಬರದೆ ಕೆಲವು ವರ್ಷ ಆಯಿತು ನೀವು ಮತ್ತೆ ಯಾವಾಗ ಬರುತ್ತೀಯ ಎನ್ನುವ ಭಕ್ತರ ಪ್ರಶ್ನೆಗೆ ಉತ್ತರಿಸುವ ಗಣೇಶ " ನಾನು ಹೈ ಟೆಕ್ ಆಗಿ ಅಪ್ಡೇಟ್ ಆಗಿದ್ದೀನಿ. ನಿಮ್ಮ ಬಳಿ ಒಬ್ಬನ್ನು ಕಳುಹಿಸುತ್ತಿದ್ದೇನೆ ಆದರೆ ನಿಮ್ಮ ಮೊಬೈಲ್ ಪಾಸ್ವರ್ಡ್ ಗೆ ನೀವೇ ಜವಾಬ್ದಾರರು " ಎಂದು ಭಕ್ತರನ್ನು ಎಚ್ಚರಿಸುವ ಟೈಟಲ್ ಟೀಸರ್ ಇದೀಗ ವೈರಲ್ ಆಗಿದೆ. ಅನಿಲ್ ಶೆಟ್ಟಿ ಅವರ ಹೋಂ ಬ್ಯಾನರ್ ಮಾಸ್ ಪ್ರೊಡಕ್ಷನ್ ಕಂಪನಿ ನಿರ್ಮಾಣ ಮಾಡುತ್ತಿರುವ ಸಿನಿಮಾ " ಲಂಬೋಧರ 2.0 " ದಲ್ಲಿ ಅನಿಲ್ ನಾಯಕ ನಟನಾಗಿ ಅಭಿನಯಿಸುತ್ತಿದ್ದು ಒಂದು ಒಳ್ಳೆ ಸಿನಿಮಾ ಮಾಡಲು ಸೃಜನಶೀಲ ತಾಂತ್ರಿಕ ತಂಡವನ್ನು ಕಟ್ಟುತ್ತಿದ್ದಾರೆ. " ಬ್ಯಾಚುಲರ್ ಪಾರ್ಟಿ " ಚಿತ್ರ ನಿರ್ದೇಶಕ ಅಭಿಜಿತ್ ಮಹೇಶ್ ಚಿತ್ರಕಥೆ ಮತ್ತು ಸಂಭಾಷಣೆ ಬರೆಯುತ್ತಿದ್ದು ಸದ್ಯದಲ್ಲೇ ಇಡಿ ಚಿತ್ರ ತಂಡ ಘೋಷಣೆಯಾಗಲಿದೆ.

# ತವರು ಮನೆಯ ಅತ್ಯಮೂಲ್ಯ ರತ್ನವೇ ಈ 'ತವರೂರ ಬಾಗಿನ'

ತವರೂರ ಮನೆ ನೋಡ ಬಂದೆ, ತಾಯ ನೆನಪಾಗಿ ಕಣ್ಣೀರ ತಂದೆ" ಈ ಹಾಡು ಕೇಳುತ್ತಿದ್ದಂತೆ ಕಣ್ಣಂಚಲ್ಲಿ ನೀರಿಳಿದು ಬಿಡುತ್ತದೆ. ಪ್ರತಿ ಹೆಣ್ಣಿಗೆ ತವರು ಮನೆ ಎಂದರೆ ಸ್ವರ್ಗವಿದ್ದಂತೆ. ತವರೂರಿನ ಮಣ್ಣಿಗೂ ಹೆಣ್ಣಿಗೂ ಇರುವ ನಂಟು ಬಿಡಿಸಲಾಗದು.

ಶಿವನು ಹಿಮವಂತನ ಮಗಳು ಪಾರ್ವತಿ ದೇವಿಯನ್ನುವರಿಸಿದ. ಬಳಿಕ ಭೂ ಲೋಕದಿಂದ ದೇವಲೋಕಕ್ಕೆ ಕರೆದುಕೊಂಡು ಹೋದಾಗ ಪಾರ್ವತಿ ದೇವಿಗೆ ಮನಸ್ಸಿಗೆ ತುಂಬಾ ಬೇಸರವೆನಿಸುತ್ತದೆ. ಆಗ ಶಿವ ಬೇಸರಿಸಿಕೊಳ್ಳಬೇಡ, ಒಂದು ತಿಂಗಳು ಭೂ ಲೋಕದಲ್ಲಿ ಇದ್ದು ಬಿಡು, ಪ್ರತಿ ಮಂಗಳವಾರ ಎಲ್ಲರೂ ನಿನ್ನನ್ನು "ಮಂಗಳ ಗೌರಿ "ಎಂದು ಪೂಜಿಸಲಿ, ಪ್ರತಿ ವಾರವೂ ಗೌರಿ ಪೂಜೆ ನಡೆಯಲಿ, ನಾಲ್ಕು ವಾರದ ನಂತರ ಗೌರಿ ಹಬ್ಬ ಬರುತ್ತದೆ. ನಂತರ ಬರೋದು ಭಾದ್ರಪದ ಮಾಸದ ಮೂರನೇ ದಿನ, ಆದಾದ ನಾಲ್ಕನೇ ದಿನ ಗಣೇಶನೊಂದಿಗೆ ವಾಪಾಸು ಬಂದು ಬಿಡು ಎಂದು ಶಿವನ ಅಪ್ಪಣೆಯಾಗುತ್ತದೆ. ಹಾಗಾಗಿ ಇಂದಿಗೂ ಗೌರಿ ಬಂದ ಮೇಲೆಯೇ ಗಣೇಶನನ್ನು ಪ್ರತಿಷ್ಠಾಪಿಸಿ ಪೂಜಿಸುವುದು ಆಚರಣೆಯಲ್ಲಿದೆ. ಅಂದಿನಿಂದ ಮುತ್ತೈದೆಯರಿಗೆ ಬಾಗಿನವನ್ನು ಕೊಡುವ ಸಂಪ್ರದಾಯ ಪದ್ಧತಿ ಆಚರಣೆಯಲ್ಲಿದೆ, ಇಂದಿಗೂ ಜೀವಂತಿಕೆ ಹೊಂದಿದೆ.

ಒಂದು ವೇಳೆ ಅಣ್ಣ ತಂಗಿ ಎಷ್ಟೇ ಮುನಿಸಿಕೊಂಡಿದ್ದರೂ ಬಾಗಿನ ಕೊಡುವ ನೆಪದಲ್ಲಾದರೂ ವರ್ಷಕ್ಕೊಮ್ಮೆ ಬಂದು ಹಾಲುಂಡ ಮನೆಯ ಉಡುಗೊರೆ, ಪ್ರೀತಿಯನ್ನು ಅಣ್ಣ ಉಣಿಸುತ್ತಾನೆ. ಇದರಲ್ಲಿ ಸಿಗುವ ಸುಖ, ಸಂತೋಷ, ನೆಮ್ಮದಿ ಹೆಣ್ಣು ಮಕ್ಕಳಿಗೆ ಬೇರೆ ಯಾವುದರಲ್ಲೂ ಸಿಗದು.

ಭಾರತೀಯ ಸಾಂಸ್ಕೃತಿಕ ಪರಂಪರೆಯಲ್ಲಿ ಪ್ರತಿಯೊಂದು ಹಬ್ಬ-ಹರಿದಿನ ಹಾಗೂ ಆಚರಣೆಗಳಿಗೆ ವೈಜ್ಞಾನಿಕ ಕಾರಣಗಳಿದೆ. ಸಾಂಸ್ಕೃತಿಕ ಹಿನ್ನೆಲೆಯೂ ಇದೆ. ಯುಗಾದಿ ಹಬ್ಬದಲ್ಲಿ ಬೇವು-ಬೆಲ್ಲ ತಿನ್ನುವುದಕ್ಕೂ ಕಾರಣವಿದೆ. ಹೌದು, ಯುಗಾದಿಯಲ್ಲಿ ಬೇವು-ಬೆಲ್ಲವನ್ನು ಸವಿಯುತ್ತೇವೆ, ಬೇವು ಎಂಬುದು ಕಹಿ, ಕಷ್ಟದ ಸೂಚಕ, ಬೇವು ನೈಸರ್ಗಿಕವಾಗಿ ದೊರೆಯುವಂತದ್ದು , ಆದರೆ ಬೆಲ್ಲವನ್ನು ನಾವೇ ತಯಾರಿಸಿಕೊಳ್ಳಬೇಕು, ಅಂದರೆ ಸತತ ಪರಿಶ್ರಮದೊಂದಿಗೆ ಕಾಯಕದ ಮಾಡಿದಾಗ ಬೆಲ್ಲವೆಂಬ ಸುಖ ನಮ್ಮದಾಗುತ್ತದೆ. ಹೀಗೇ ಎಲ್ಲಾ ಆಚರಣೆಗಳಿಗೂ ವೈಜ್ಞಾನಿಕ ಕಾರಣಗಳಿದೆ. ಹಾಗೆಯೇ ಗೌರಿ- ಗಣೇಶ ಹಬ್ಬದಲ್ಲಿ ಬಾಗಿನ ಕೊಡುವುದಕ್ಕೂ ವೈಜ್ಞಾನಿಕ ಕಾರಣಗಳಿದೆ. ಹಾಗಿದ್ದರೆ ಮುತ್ತೈದೆಯರಿಗೆ ಬಾಗಿನದ ಮಹತ್ವದ ಬಗ್ಗೆ ಮೆಲುಕು ಹಾಕೋಣ.




ಸ್ವರ್ಣ ಗೌರಿ ಹಬ್ಬದ ಬಾಗಿನವನ್ನು ಬಿದಿರಿನ ಮೊರದಲ್ಲೇ ಕೊಡುವುದೂ ಒಂದು ವಿಶೇಷ ಮತ್ತು ಅರ್ಥಪೂರ್ಣ ಕೂಡ ಬಿದಿರು ಸ್ವಾಭಾವಿಕವಾಗಿ ಬೆಳೆಯುವಂತದ್ದು , ಬಿದಿರು ನೂರಾರು ಕುಡಿಗಳೊಂದಿಗೆ ಹರಡುತ್ತಾ ಹೇಗೆ ಬೆಳೆಯುತ್ತದೆಯೋ ಹಾಗೆಯೇ ನಿನ್ನ ವಂಶವೂ ಬೆಳೆಯಲಿ, ಉದ್ಧಾರವಾಗಲಿ ಎಂಬ ಕಾರಣಕ್ಕಾಗಿಯೇ ಬಿದಿರಿನ ಮೊರದಲ್ಲೇ ಭಾಗಿನ ಅರ್ಪಣೆ ಮಾಡುವುದು ವಿಶೇಷ.

ಮೊರಕ್ಕೆ ಅರಿಶಿಣವನ್ನೇ ಬಳಸಲು ಕಾರಣವೂ ಇದೆ. ಆರಿಶಿಣಕ್ಕೆ ನಮ್ಮ ದೇಹದ ಮತ್ತು ಜೀವನದ ಧಾರಿದ್ರವನ್ನು ನಾಶ ಮಾಡುವ ಶಕ್ತಿ ಇದೆ. ಮದುಮಕ್ಕಳಿಗೆ, ಬಾಣಂತಿಯರಿಗೆ, ಹೆಣ್ಣು ಮಕ್ಕಳು ಮೈ ನೆರೆತಾಗ ಅರಿಷಿಣ ಹಚ್ಚಲಾಗುತ್ತದೆ, ಪ್ರತಿ ದಿನವೂ ಖಾಲಿ ಹೊಟ್ಟೆಯಲ್ಲಿ ಕಡಲೇ ಕಾಳಿನಷ್ಟು ಗಾತ್ರದ ಆರಿಶಿಣದ ಉಂಡೆಯನ್ನು ಮಾಡಿ ತುಪ್ಪದಲ್ಲಿ ಬೆರೆಸಿ ಸೇವಿಸಿ ಹೆಚ್ಚು ಪ್ರಮಾಣದ ನೀರನ್ನು ಕುಡಿದರೆ ದೇಹದೊಳಗಿನ ಧಾರಿ ಹೋಗುತ್ತದೆ, ಜೊತೆಗೆ ಪ್ರತಿ ನರ-ನಾಡಿಗಳಲ್ಲೂ ರಕ್ತ ಸಂಚಾರ ಸರಳವಾಗುತ್ತದೆ. ಇದು ದೇಹಕ್ಕೆ ಮದ್ದು ಕೂಡ. ಇದು ವೈಜ್ಞಾನಿಕ ಸತ್ಯ ಕೂಡ. ಹಾಗೆಯೇ ಕುಂಕುಮ ಲಕ್ಷ್ಮಿಯ ಸಂಕೇತ.

ಅರಿಶಿಣ, ಕುಂಕುಮದಿಂದ ಸಿಂಗರಿಸಿದ ಮೊರದೊಳಗೆ ಬಾಳೆ ಎಲೆಯನ್ನಿಟ್ಟು ಮಹಾಲಕ್ಷ್ಮಿ ಸ್ವರೂಪವಾದ ಅರಿಶಿಣ-ಕುಂಕುಮ, ಶೃಂಗಾರ ಲಕ್ಷ್ಮಿಯಾದ ಕನ್ನಡಿ, ಧನಲಕ್ಷ್ಮಿಯ ಸ್ವರೂಪವಾದ ವೀಳ್ಯದೆಲೆ. ಹಾಗೆಯೇ ಕುಲ ದೇವರ ಪ್ರಾಪ್ತಿಗಾಗಿ ವಸ್ತ್ರ ದಾನ, ಇಷ್ಟಾರ್ಥ ಸಿದ್ದಿಗಾಗಿ ಅಡಕೆ ಹಾಗೂ ವಿಘ್ನ ನಿವಾರಣೆಗಾಗಿ ಪೂರ್ಣಫಲ ಸೇರಿದಂತೆ ನಾನಾ ರೀತಿಯ ಫಲವನ್ನಿಡಲಾಗುತ್ತದೆ, ಜೊತೆಗೆ ಅಕ್ಕಿ , ಕಡಲೆ ಬೇಳೆ, ತೊಗರಿ ಬೇಳೆ, ಹೆಸರು ಬೇಳೆ, ಉದ್ದಿನ ಬೇಳೆ, ರವೆ, ಉಪ್ಪು , ಹೂವು, ಊದುಬತ್ತಿ, ಐದು ಮಂಗಳಾರತಿ ಬತ್ತಿ, ಬಳೆ, ಬಿಚ್ಚಾಲೆ, ರವಿಕೆ ಕಣ, ಅಚ್ಚು ಬೆಲ್ಲ, ಬಾಳೆಹಣ್ಣು , ದಕ್ಷಿಣೆ ಇಡಲಾಗುತ್ತದೆ.

ತೆಂಗಿನ ಕಾಯಿ ಪೂರ್ಣಪಲ, ಇದಕ್ಕೆ ವಿಭಿನ್ನವಾದ ಅರ್ಥವೂ ಇದೆ. ತೆಂಗಿನ ಕಾಯಿಯ ಸಿಪ್ಪೆ ಪ್ರಪಂಚವಿದ್ದಂತೆ, ನಾರು ಸಂಬಂಧವಿದ್ದಂತೆ, ಚಿಪ್ಪೊಳಗಿನ ತೆಂಗಿನ ಕೊಬ್ಬರಿ ಅದು ನಾವಿದ್ದಂತೆ, ಎಳನೀರು ಕಾಮ, ಕ್ರೋಧ, ಲೋಭ, ಮೋಹ, ಮಧ. ಮತ್ಸರ ಹೀಗೆ ಅರಿಷಡ್ವರ್ಗಗಳಿದ್ದಂತೆ. ನೀರನ್ನು ಭಗವಂತನಿಗೆ ಪ್ರೋಕ್ಷಣೆ ಮಾಡಿದಾಗ ಜೀವಾತ್ಮ ಪರಮಾತ್ಮನಲ್ಲಿ ವಿಲೀನವಾಗುತ್ತದೆ. ಇದು ತೆಂಗಿನ ಕಾಯಿಯ ಮಹಿಮೆ ಮತ್ತು ಮಹತ್ವ. ಅಕ್ಕಿ ಕೂಡ ಅನ್ನದಾನದ ಸೂಚಕ, ಹಾಗೆಯೇ ನಮ್ಮೆಲ್ಲ ಕಷ್ಟ-ಕಾರ್ಪಣ್ಯಗಳು ಪರಿಹಾರವಾಗಲಿ ಎಂಬ ಕಾರಣದಿಂದಾಗಿ ಅದರೊಟ್ಟಿಗೆ ವಿವಿಧ ಬೇಳೆ-ಕಾಳು ಸೇರಿದಂತೆ ಧಾನ್ಯಗಳನ್ನಿಡುವ ಪ್ರತೀತಿ ಇದೆ.




ಹೀಗೆ ಭಾಗ್ಯ ಮತ್ತು ಲಕ್ಷ್ಮಿಯ ಸಂಕೇತದ ಮಂಗಳ ದ್ರವ್ಯಗಳನ್ನಿಟ್ಟು ಮೊದಲು ಸ್ವರ್ಣಗೌರಿಗೂ, ಆನಂತರ ಮುತ್ತೈದೆಯರಿಗೆ ಬಾಗಿನವನ್ನು ಕೊಡುವಂತ ಸಂಸ್ಕಾರ ಮತ್ತು ಸಂಸ್ಕೃತಿ ನಮ್ಮ ಸಂಪ್ರದಾಯದ ಹಿರಿಮೆ. ಇಂತಹ ಮಹತ್ವ ಸಾರುವ ಲಕ್ಷ್ಮಿ ಸ್ವರೂಪವಾದ ಬಾಗಿನ ಪಡೆದು ಸಂಭ್ರಮಿಸಿ, ಹೆತ್ತ ಮನೆಗೆ ಹರಸುವ ಗೌರಿ-ಗಣೇಶ ಹಬ್ಬಕ್ಕೆ ಹೋಗುವುದೆಂದರೆ ಮೂಟೆಯಷ್ಟು ಸಂಭ್ರಮ ಮದುವೆಯಾಗಿ ಎಷ್ಟೇ ವರ್ಷಗಳು ಕಳೆದಿದ್ದರೂ ತವರಿನ ಮಣ್ಣಲ್ಲಿ ಇಟ್ಟ ಮೊದಲ ಹೆಜ್ಜೆ. ಬಾಲ್ಯದಲ್ಲಿ ಕುಣಿದು ಕುಪ್ಪಳಿಸಿದ ಸಂಭ್ರಮ, ಅಲ್ಲಿನ ನಗು, ಅಳು ಹಾಗೆಯೇ ಎಲ್ಲದಕ್ಕೂ ಮಿಗಿಲಾದ ತಾಯಿಯ ಪ್ರೀತಿ ಇದೆಯಲ್ಲಾ ಅವೆಲ್ಲದರ ಸೆಳೆತವೇ ಹಾಲುಂಡ ಮನೆಯನ್ನು ಕೈ ಬೀಸಿ ಕರೆಯುತ್ತಲೇ ಇರುತ್ತದೆ. ಅತ್ಯಂತ ಶ್ರೀಮಂತ ಸಾಂಸ್ಕೃತಿಕ ಹಿರಿಮೆ ಹೊಂದಿದ ನಮ್ಮ ದೇಶದಲ್ಲಿ ಎಲ್ಲಾ ಹಬ್ಬಗಳಿಗಿಂತಲೂ ಅದ್ದೂರಿ ಹಾಗೂ ಕಲರ್ ಪುಲ್ ಹಬ್ಬವೆಂದರೆ ಅದು ಗೌರಿ -ಗಣೇಶ ಗಣೇಶನೆಂದರೆ ಮಹಾ ಬುದ್ಧಿಶಾಲಿ, ಅದ್ಭುತ, ಅಗ್ರಪೂಜೆಗೆ ಅಧಿಪತಿ, ಗಣೇಶನ ದೊಡ್ಡ ಹೊಟ್ಟೆಯು ಔದಾರ್ಯದ ಸಂಕೇತ, ಇಡೀ ಬ್ರಹ್ಮಾಂಡ.ಈ ವಿಘ್ನ ನಿವಾರಕನ ಉತ್ಸವವನ್ನು ಜಾತ್ಯಾತೀತವಾಗಿ, ಪಕ್ಷತೀತಾವಾಗಿ, ಧರ್ಮಾತೀತವಾಗಿ ಆಚರಿಸುತ್ತೇವೆ. ಗಣಪತಿಯನ್ನು ಪಾರ್ವತಿಯು ತನ್ನ ಮೈ ಮಣ್ಣಿನಿಂದ ಮಾಡಿದಳೆಂಬುದು ಪುರಾಣಗಳಲ್ಲಿ ಉಲ್ಲೇಖವಾಗಿದೆ. ಇದು ಗಣೇಶನಿಗೂ ಮಣ್ಣಿಗೂ ಇರುವ ಸಂಬಂಧದ ಸೂಚಕ.

ಹಾಗಾಗಿ ಗಣೇಶನ ಹಬ್ಬದಂದು ಮಣ್ಣಿನಿಂದ ಮಾಡಿದ ಮೂರ್ತಿಯನ್ನು ಪೂಜಿಸುವುದು ತುಂಬಾ ಶ್ರೇಷ್ಠ. ಅಲ್ಲದೇ ರಾಸಾಯನಿಕ ಬಣ್ಣಗಳ ಲೇಪಿಸಿದ ಗಣೇಶಮೂರ್ತಿಯನ್ನು ನದಿ, ಕೆರೆ, ಬಾವಿ, ಹಳ್ಳಗಳಲ್ಲಿ ವಿಸರ್ಜಿಸಿದರೆ ಜಲ ಜೀವರಾಶಿಗಳ ಜೀವಕ್ಕೂ ಎರವಾಗುತ್ತದೆ, ಕುಡಿಯವ ನೀರು ವಿಷವಾಗಿ ಆರೋಗ್ಯಕ್ಕೆ ಹಾನಿಯುಂಟು ಮಾಡಬಹುದು. ಹಾಗಾಗಿ ಶಾಸ್ತ್ರ, ಪುರಾಣಗಳಲ್ಲಿ ಉಲ್ಲೇಖಿಸಿದಂತೆ ಮಣ್ಣಿನ ಗಣೇಶಮೂರ್ತಿಯನ್ನು ಪ್ರತಿಷ್ಟಾಪಿಸುವುದು ಒಳ್ಳೆಯದು. ಹಾಗೆಯೇ ಗಂಗೆಯೂ ಭೂಮಿಯ ಮೇಲಿನ ಪ್ರತಿ ಜಲಚರ, ಜೀವರಾಶಿಗಳಿಗೂ ಜೀವಜಲ ಉಣಿಸಿ ಜೀವ ಕಾಪಾಡುವಳು, ಆಕೆಯೂ ಸಂತೋಷದಿಂದ ಇರಬೇಕೆಂಬ ಕಾರಣದಿಂದ ವರ್ಷಧಾರೆಯಿಂದ ಮೈದುಂಬಿ ಹರಿಯುವಾಗ ಬಾಗಿನ ಅರ್ಪಣೆ ಮಾಡಲಾಗುತ್ತದೆ, ಪ್ರತಿ ಜೀವರಾಶಿಗೂ ಜೀವಜಲ ಉಣಿಸುವ ಗಂಗಾಮಾತೆಗೂ ಬಾಗಿನ ಅರ್ಪಿಸುವುದು ಹಿಂದೂ ಸಂಪ್ರದಾಯ, ಇಂತಹ ಅರ್ಥಪೂರ್ಣ ಹಬ್ಬವು ಸಂಪತ್ತು, ಉತ್ತಮ ಆರೋಗ್ಯ, ಸುಖ, ಶಾಂತಿ, ನೆಮ್ಮದಿಯನ್ನು ನೀಡಲಿ, ಗೌರಿ-ಗಣೇಶರ ಕೃಪಾಶೀರ್ವಾದ ನಮ್ಮೆಲ್ಲರ ಮೇಲಿರಲಿ ಎಂದು ಭಗವಂತನ್ನು ಪ್ರಾರ್ಥಿಸುತ್ತಾ ಸರ್ವರಿಗೂ ಗೌರಿ- ಗಣೇಶ ಹಬ್ಬದ ಹಾರ್ದಿಕ ಶುಭಾಶಯಗಳು.



**ಸಾಯಿಕುಮಾರ್. ಎನ್. ಕೆ**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.